# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 616 |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಇತ್ತೀಚೆಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗು ಇತರ ವೃಂದಗಳ ನೌಕರರು ವಿವಿಧ ಬೇಡಿಕೆ ಮುಂದಿಟ್ಟು ಮುಷ್ಕರ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಪಿ.ಡಿ.ಓ ಉಳಿದ ವೃಂದ ಹಾಗೂ ಪಂಚಾಯತ್ ನೌಕರರ ಪ್ರಮುಖ ಬೇಡಿಕೆಗಳೇನು; | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ವೃಂದ ಸಂಘಗಳು ಹಾಗೂ ಗ್ರಾಮ ಪಂಚಾಯತ್ ಸದಸ್ಯರ ಒಕ್ಕೂಟಗಳು ಸಲ್ಲಿಸಿರುವ ಬೇಡಿಕೆಗಳ ಪಟ್ಟಿಯನ್ನು ಅನುಬಂಧದಲ್ಲಿ ನೀಡಿದೆ. |
| (ಇ) | ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಲು ಎಷ್ಟು ವರ್ಷಗಳಿಂದ ಬಾಕಿ ಉಳಿದಿದೆ; ನ್ಯಾಯಾಲಯದಲ್ಲಿ ಬಹಳ ವರ್ಷಗಳಿಂದ ಪ್ರಕರಣ ವಿಳಂಬವಾಗಲು ಇಲಾಖೆಯ ಉನ್ನತ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕಿದೆಯೇ; | ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂಖ್ಯೆ:4524/2021 ರಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:22-06-2023 ರ ಆದೇಶದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲು ನಿರ್ದೇಶನ ನೀಡಿರುವ ಮೇರೆಗೆ ಸಮಿತಿಯನ್ನು ರಚಿಸಲಾಯಿತು. ಸದರಿ ಸಮಿತಿಯು ದಿನಾಂಕ:21-02-2014 ರ ಅಧಿಕೃತ ಜ್ಞಾಪನ ಸಂಖ್ಯೆ:ಗ್ರಾಅಪ 374 ಗ್ರಾಪಂಕಾ 2013 ರಲ್ಲಿ ಪ್ರಕಟಗೊಂಡ ಜೇಷ್ಠತಾ ಪಟ್ಟಿಯಲ್ಲಿ ಬಾಧಿತರಾದ ನೌಕರರ ಹೇಳಿಕೆಗಳನ್ನು ಆಲಿಸಿ, ಅವರುಗಳ ಆಕ್ಷೇಪಣೆಗಳನ್ನು ಪರಿಶೀಲಿಸಲು ದಿನಾಂಕ:08-06-2024 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆ<br><br>ಅದರಂತೆ ಸರ್ಕಾರವು ದಿನಾಂಕ:13-06-2024 ರಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವೃಂದದ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದೆ. ಸಮಿತಿಯ ವರದಿಯನ್ನು ಪ್ರಶ್ನಿಸಿ, ಮಾನ್ಯ ನ್ಯಾಯಾಲಯದಲ್ಲಿ ಮಧ್ಯಂತರ ಅರ್ಜಿಯನ್ನು ಸಲ್ಲಿಸಲಾಗಿದ್ದು, ದಿನಾಂಕ:17-06-2024 ರ ಮಧ್ಯಂತರ ಆದೇಶದಲ್ಲಿ ಮಾನ್ಯ ನ್ಯಾಯಾಲಯವು ಆಕ್ಷೇಪಣೆಗಳನ್ನು ಪರಿಶೀಲಿಸುವಂತೆ ಹಾಗೂ ಮುಂದಿನ ವಿಚಾರಣಾ ದಿನಾಂಕದವರೆಗಿನ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬಾರದೆಂದು ನಿರ್ದೇಶನ ನೀಡಿದೆ.<br><br>ಸ್ವೀಕರಿಸಿದ ಆಕ್ಷೇಪಣೆಗಳು ಪರಿಗಣನೆಯಲ್ಲಿವೆ. ಮಾನ್ಯ ನ್ಯಾಯಾಲಯದ ಮುಂದಿನ ಆದೇಶವನ್ನು ಅನುಸರಿಸಿ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಗೊಂಡ ನಂತರ ನಿಯಮಾನುಸಾರ ಕ್ರಮ ವಹಿಸಲಾಗುವುದು. |

| | | |
|---|---|---|
| (ಈ) | ಪಂಚಾಯಿತ್ ಅಭಿವೃದ್ಧಿ ಅಧಿಕಾರಿಗಳ ಹಾಗೂ ನೌಕರರ ಬೇಡಿಕೆಗಳನ್ನು ಕಾಲಮಿತಿಯಲ್ಲಿ ಈಡೇರಿಸಿ, ನೌಕರರ ಹಿತ ಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ವೃಂದ ಸಂಘಗಳು ಹಾಗೂ ಗ್ರಾಮ ಪಂಚಾಯತಿ ಸದಸ್ಯರ ಒಕ್ಕೂಟಗಳು ಸಲ್ಲಿಸಿರುವ ಬೇಡಿಕೆಗಳ ಕುರಿತು ಪರಿಶೀಲಿಸಲಾಗಿರುತ್ತದೆ. ಅಧಿಕಾರಿ/ ಕೆಲವು ಸಿಬ್ಬಂದಿಗಳ ಸೇವಾ ವಿಷಯ/ ಬೇಡಿಕೆಗಳನ್ನು ಪರಿಶೀಲಿಸಲು ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ರವರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಲಾಗಿದ್ದು, ಸದರಿ ಸಮಿತಿಗೆ ಪರಿಶೀಲಿಸಿ ವರದಿಯನ್ನು ಸಲ್ಲಿಸಲು 3 ತಿಂಗಳ ಕಾಲಾವಕಾಶ ನೀಡಲಾಗಿದೆ. ಈ ಸಮಿತಿ ವರದಿ ಸಲ್ಲಿಸಿದ ನಂತರ ಬೇಡಿಕೆಗಳ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಗ್ರಾಅಪ 675 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

## ಅನುಬಂಧ-1

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ಮತ್ತು ನೌಕರರ ಎಲ್ಲಾ ವೃಂದ ಸಂಘಗಳು ಹಾಗೂ ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ಬೇಡಿಕೆಗಳು.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಂಘದ ಬೇಡಿಕೆಗಳು.

| ಕ್ರ. ಸಂ | ಬೇಡಿಕೆಗಳು |
|---|---|
| 1 | ಏಳು ವರ್ಷ ಪೂರೈಸಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಬೇರೆ ತಾಲೂಕಿಗೆ ವರ್ಗಾವಣೆ ಮಾಡುವ ನಿಯಮವನ್ನು ಕೈಬಿಡುವುದು ಹಾಗೂ ಜಿಲ್ಲೆಯಿಂದ ಬೇರೆ ಜಿಲ್ಲೆಗೆ ಇಚ್ಛೆ ಇಲ್ಲದ್ದಿದರೂ ಸಾರ್ವಜನಿಕ ಹಿತಾಸಕ್ತಿ ಎಂದು ತೋರಿಸಿ ವರ್ಗಾವಣೆ ಮಾಡಬಾರದು ಮತ್ತು ವರ್ಗಾವಣೆ ನಿಯಮಗಳಲ್ಲಿ ಯಾವುದೇ ಬದಲಾವಣೆಗೆ ಮುನ್ನ ಸಂಘದ ಸಲಹೆಯನ್ನು ಪಡೆಯುವುದು ಮತ್ತು ಕಡ್ಡಾಯ ನಿರೀಕ್ಷಣೆಯಲ್ಲಿರುವ ಪಂ.ಅ.ಅ/ಕಾರ್ಯದರ್ಶಿಗಳಿಗೆ ಕೆಲವು ಜಿಲ್ಲೆಗಳಲ್ಲಿ ವೇತನ ಪಾವತಿಸಿರುವುದಿಲ್ಲ. |
| 2 | ರಾಜ್ಯದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯನ್ನು **ಗೆಜೆಟೆಡ್ ಗ್ರೂಪ್ "ಬಿ"** ದರ್ಜೆಗೆ ಉನ್ನತೀಕರಿಸುವುದು. |
| 3 | ಗ್ರಾಮ ಪಂಚಾಯತಿಗೆ ಅಗತ್ಯವಿರುವ ಕಾರ್ಯದರ್ಶಿಗಳು, ಲೆಕ್ಕ ಸಹಾಯಕರು ಹಾಗೂ ಅಗತ್ಯವಿದ್ದಷ್ಟು ಗ್ರಾಮ ಪಂಚಾಯತ್ ಸಿಬ್ಬಂದಿಗಳನ್ನು ನೇಮಕ ಮಾಡುವುದು. |
| 4 | ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿ ಹಾಗೂ ಬಡ್ತಿಯಲ್ಲಿನ ಸಮಸ್ಯೆಗಳನ್ನು ತುರ್ತಾಗಿ ಪರಿಹರಿಸುವುದು. |
| 5 | ಕುಂದು ಕೊರತೆ ಪ್ರಾಧಿಕಾರವನ್ನು ಪೊಲೀಸ್ ಇಲಾಖೆ ಮಾದರಿಯಲ್ಲಿ ಸದೃಢಗೊಳಿಸುವುದು. ಮತ್ತು ತಜ್ಞರ ಸಮಿತಿ ನೇಮಿಸುವುದು.<br>ಸೇವಾ ವಿಷಯಗಳನ್ನು ಸಕಾಲ ವ್ಯಾಪ್ತಿಗೆ ತರುವುದು.<br>ಎಲ್ಲ ತಂತ್ರಾಂಶಗಳಿಗೆ ಏಕರೂಪದ ಸಹಾಯವಾಣಿ ವ್ಯವಸ್ಥೆ ಜಾರಿಗೊಳಿಸುವುದು. |
| 6 | ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿಯಾಗಿ ಪರಿವರ್ತನೆಗೊಂಡಾಗ, ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ನೌಕರರನ್ನು ಪಟ್ಟಣ ಪಂಚಾಯತಿಯಲ್ಲಿ ವಿಲೀನಗೊಳಿಸುವುದು. |
| 7 | ಸಂಘದ ಸಲಹೆಯ ಮೇರೆಗೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ನೌಕರ ಸ್ನೇಹಿ ತಿದ್ದುಪಡಿಯನ್ನು ತರುವುದು |
| 8 | ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಇತರೆ ಇಲಾಖೆಯಲ್ಲಿರುವ ಸಮಾನಾಂತರ ಹುದ್ದೆಗಳಿಗೆ ನಿಯೋಜನೆ ಮೇಲೆ ಹೋಗಲು ಒಟ್ಟು ಮಂಜೂರಾದ ಹುದ್ದೆಗಳಲ್ಲಿ 10% ಹುದ್ದೆಗಳಿಗೆ ಅನುಮತಿ ನೀಡುವುದು. |
| 9 | ಪಂಚಾಯತಿ ಅಭಿವೃದಿ ಅಧಿಕಾರಿಗಳಿಗೆ ಪ್ರಯಾಣ ಭತ್ಯೆ ಹೆಚ್ಚಳ ಮಾಡುವುದು |

ಗ್ರೇಡ್-1 ಮತ್ತು ಗ್ರೇಡ್-2 ಕಾರ್ಯದರ್ಶಿಗಳ ಬೇಡಿಕೆ

| ಕ್ರ. ಸಂ | ಬೇಡಿಕೆಗಳು |
|---|---|
| 1 | ಗ್ರೇಡ್ -1 ಕಾರ್ಯದರ್ಶಿಗಳ ವೃಂದದ ಜೇಷ್ಠತಾ ಪಟ್ಟಿಯನ್ನು ತುರ್ತಾಗಿ ಪ್ರಕಟಣೆ ಮಾಡಿ, ಪಿ ಡಿ ಓ ವೃಂದಕ್ಕೆ ಮುಂಬಡ್ತಿ ನೀಡುವ ಬಗ್ಗೆ ಆಯುಕ್ತರಿಗೆ ಸರ್ಕಾರದ ನಿರ್ದೇಶನವಿದ್ದರೂ, ಮುಂಬಡ್ತಿ ನೀಡದೆ ನಿರಾಸಕ್ತಿ ವಹಿಸುತ್ತಿರುವುದು ಸಾವಿರಕ್ಕೂ ಅಧಿಕ ವಿವಿಧ ವೃಂದದ ನೌಕರರು ಮುಂಬಡ್ತಿಯಿಂದ ವಂಚಿತರಾಗಿದ್ದು, ಕಾಲಮಿತಿಯೊಳಗೆ ಮುಂಬಡ್ತಿಗೆ ಕ್ರಮವಹಿಸಲು ಕೋರುತ್ತೇವೆ. |
| 2 | ಕಾರ್ಯದರ್ಶಿ ಗ್ರೇಡ್-1 ವೃಂದದಿಂದ ಪಿಡಿಓ ವೃಂದಕ್ಕೆ ಈಗಿರುವ ಮುಂಬಡ್ತಿ ಅನುಪಾತವನ್ನು ಶೇಕಡ 35 ರಿಂದ 60ಕ್ಕೆ ಹೆಚ್ಚಿಸುವ ಬಗ್ಗೆ. (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 2014ನೇ ಮತ್ತು 2018ನೇ ಸಾಲಿನಲ್ಲಿ ನೇರ ನೇಮಕಾತಿ ಹೊಂದಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಮತ್ತು ಕಾರ್ಯದರ್ಶಿ ಗ್ರೇಡ್ -1 ವೃಂದದ ಸಮಾನ ವಯಸ್ಕರು ಸೇವೆಗೆ ಸೇರಿರುವುದರಿಂದ ಮುಂಬಡ್ತಿಯ ಅವಕಾಶಗಳು ಕಡಿಮೆಯಾಗಿರುತ್ತದೆ) |
| 3 | 7 ವರ್ಷ ಒಂದೇ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಜಿಲ್ಲೆಯ ಬೇರೆ ತಾಲ್ಲೂಕಿಗೆ ವರ್ಗಾಯಿಸುವ ಕರಡು ಅಧಿಸೂಚನೆಯನ್ನು ಹಿಂಪಡೆಯುವ ಬಗ್ಗೆ. |
| 4 | ಗ್ರೇಡ್-1 ಕಾರ್ಯದರ್ಶಿಗಳಿಗೆ ಪಂ.ಅ.ಅ. ಪದೋನ್ನತಿಯನ್ನು ಜಿಲ್ಲಾ ಮಟ್ಟದಲ್ಲಿ ಕೊಡಬೇಕು. |
| 5 | ಗ್ರೇಡ್-2 ಕಾರ್ಯದರ್ಶಿಗಳಿಗೆ ಪ್ರಭಾರ ಪಂ.ಅ.ಅ. ಗಳ ಚಾರ್ಜ್ ಕೊಡಿಸಲು ಆದೇಶ ಮಾಡಿಸಬೇಕು. |
| 6 | ಗ್ರೇಡ್-2 ಕಾರ್ಯದರ್ಶಿ ಹುದ್ದೆಯಿಂದ ಗ್ರೇಡ್-1 ಕಾರ್ಯದರ್ಶಿ ಹುದ್ದೆಗೆ ಕಳೆದ 12 ರಿಂದ 14 ವರ್ಷಗಳ ಕಾಲ ಬಡ್ತಿ ಇಲ್ಲದೆ ಕಾರ್ಯ ನಿರ್ವಹಿಸುತ್ತಿದ್ದು, ಗ್ರೇಡ್-2 ಕಾರ್ಯದರ್ಶಿಗಳಿಗೆ ನೇರ ನೇಮಕಾತಿ ಕೋಟಾದಡಿ ಒಂದು ಬಾರಿ ಏಕಕಾಲದಲ್ಲಿ ಬಡ್ತಿ ನೀಡುವುದು. |
| 7 | ಗ್ರೇಡ್-2 ಕಾರ್ಯದರ್ಶಿ ಹುದ್ದೆಯಿಂದ ಗ್ರೇಡ್-1 ಕಾರ್ಯದರ್ಶಿ ಹುದ್ದೆಗೆ ಬಡ್ತಿ ಶೇ.35 ರಷ್ಟಿದ್ದು ಅದನ್ನು ಶೇ.80 ಕ್ಕೆ ಹೆಚ್ಚಿಸಬೇಕು. |
| 8 | 5000 ಕ್ಕಿಂತ ಹೆಚ್ಚಿಗೆ ಇರುವ ಗ್ರಾಮ ಪಂಚಾಯತಿಗಳನ್ನ ಗ್ರೇಡ್-1 ಪಂಚಾಯತಿ ಅಂತಾ ಮೇಲ್ದರ್ಜೆಗೇರಿಸಬೇಕು. |
| 9 | ಈ ಹಿಂದೆ ಬಿಲ್ ಕಲೆಕ್ಟರ್ ಹುದ್ದೆಯಿಂದ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ಹೊಂದಿದವರಿಗೆ ಪಿಂಚಣಿ ಯೋಜನೆಗೆ ಒಳಪಡಿಸಬೇಕು. |

ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಬೇಡಿಕೆ

| ಕ್ರ. ಸಂ | ಬೇಡಿಕೆಗಳು |
|---|---|
| 1 | ಹಾಲಿ ಇರುವ ಎಲ್ಲಾ ಗ್ರಾಪಂ ಗಳಿಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆ ಸೃಜಿಸಿ, ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಪ್ರಥಮ ದರ್ಜೆ ಲೆಕ್ಕ ಸಹಾಯಕರಾಗಿ ಗ್ರೇಡ್ 1 ಗ್ರಾಪಂ ಗಳಲ್ಲಿಯೇ ಮುಂಬಡ್ತಿ ನೀಡುವುದು. |
| 2 | ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳಲ್ಲಿ ಖಾಲಿ ಇರುವ ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ಗ್ರಾಮ ಪಂಚಾಯತಿಗಳಲ್ಲಿ ಸುಮಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಬಡ್ತಿಗೆ ಪರಿಗಣಿಸುವುದು. |

| | |
|---|---|
| 3 | ಮುಂಬಡ್ತಿ ಹಾಗೂ ನೇರ ನೇಮಕಾತಿ ಮೂಲಕ ಆಯ್ಕೆಯಾಗಿ ಸುಮಾರು 10 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಒಂದೇ ಬಾರಿಗೆ ಶೇಕಡ 100% ರಷ್ಟು ಬಡ್ತಿ ನೀಡಿ ಗ್ರೇಡ್-1 ಕಾರ್ಯದರ್ಶಿ ಹುದ್ದೆಗೆ ಪರಿಗಣಿಸುವುದು |

**ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, ಕರವಸೂಲಿಗಾರ, ನೀರುಗಂಟಿ, ಜವಾನರು, ಸ್ವಚ್ಛತಾಗಾರರ ಬೇಡಿಕೆಗಳು:**

| ಕ್ರ. ಸಂ | ಬೇಡಿಕೆಗಳು |
|---|---|
| 1 | ಕರವಸೂಲಿಗಾರರು, ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್ ರರು, ನೀರುಗಂಟಿ, ಜವಾನರು ಮತ್ತು ಸ್ವಚ್ಛತೆಗಾರರು, ಪದನ್ನೋತಿ ಸಿಗದೇ ಕೊನೆಯ 5 ವರ್ಷಗಳ ನಿವೃತ್ತಿ ಹಂತದಲ್ಲಿ ಇರುವ ಸಂಧರ್ಭದಲ್ಲಿ ಗ್ರೇಡ್-2 ಕಾರ್ಯದರ್ಶಿ ಸಮಾನಾಂತರ ವೇತನ ಶ್ರೇಣಿ ನಿಗಧಿ ಮಾಡುವುದು. |
| 2 | ಗ್ರಾಮ ಪಂಚಾಯತಿಯಲ್ಲಿ ಕ್ಲರ್ಕ್/ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್ ಜೊತೆಯಲ್ಲಿ, ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್ ಗಳಿಗೆ ಒಂದು ಬಾರಿಗೆ ಅನುಮೋದನೆ ನೀಡುವುದು. ಹಾಗೂ ಕರವಸೂಲಿಗಾರರ ಜೊತೆಯಲ್ಲಿ ಇನ್ನೊಬ್ಬ ಹೆಚ್ಚುವರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಕರವಸೂಲಿಗಾರರಿಗೂ ಒಂದು ಬಾರಿಗೆ ಅನುಮೋದನೆ ನೀಡುವುದು. ಹಾಗೂ ನೀರುಗಂಟಿ, ಜವಾನ್, ಸ್ವಚ್ಛತೆಗಾರರಿಗೆ ಏಕಕಾಲಕ್ಕೆ ಅನುಮೋದನೆ ನೀಡುವುದು. |
| 3 | ಕಾರ್ಯದರ್ಶಿ ಗ್ರೇಡ್-1 ಕೋಟ 70% ರಷ್ಟು ಹೆಚ್ಚಳ ಮಾಡುವುದು. |
| 4 | ಆರ್ಥಿಕ ಇಲಾಖೆಯಲ್ಲಿ ಬಾಕಿ ಇರುವ ಸೇವಾ ಹಿರಿತನ ವೇತನ ಮತ್ತು ವೇತನ ಹೆಚ್ಚಳದ ಆದೇಶ ಜಾರಿ ಮಾಡುವ ಎರಡು ಕಡತ ಅನುಮೋದನೆ ನೀಡುವುದು. |
| 5 | ESI & PF ಜಾರಿ ಮಾಡುವುದು. |
| 6 | ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳನ್ನು ಮಂಜೂರು ಮಾಡುವುದು. |
| 7 | ಕರವಸೂಲಿಗಾರ, ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್, ನೀರುಗಂಟಿ, ಜವಾನ ಮತ್ತು ಸ್ವಚ್ಛತೆಗಾರ ರವರಿಗೆ ನಿವೃತ್ತಿ ಉಪಧನವನ್ನು 60 ತಿಂಗಳಿಗೆ ನಿಗದಿಪಡಿಸುವುದು. |
| 8 | ಗ್ರಾಮ ಪಂಚಾಯತಿ ಎಲ್ಲಾ ಸಿಬ್ಬಂದಿಗಳಿಗೆ ವೇತನ ಶ್ರೇಣಿ ಜಾರಿ ಮಾಡುವುದು |
| 9 | ಗ್ರಾಮ ಪಂಚಾಯತಿ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹಾಗೂ ಕರವಸೂಲಿಗಾರರ ವೃಂದದಿಂದ ಸೇವೆ ಒಳಗಿನ ನೇರ ನೇಮಕಾತಿಗೆ ಎಸ್.ಡಿ.ಎ.ಎ. ವೃಂದಕ್ಕೆ 75% ರಷ್ಟು ಹೆಚ್ಚಳ ಮಾಡುವುದು. |
| 10 | ಕಾರ್ಯದರ್ಶಿ ಗ್ರೇಡ್-2 ಹಾಗೂ ಎಸ್.ಡಿ.ಎ.ಎ. ನೇರ ನೇಮಕಾತಿ ಹುದ್ದೆಗಳನ್ನು ಗ್ರಾ.ಪಂ. ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹಾಗೂ ಕರವಸೂಲಿಗಾರರಿಗೆ ಒಂದು ಬಾರಿ ಮುಂಬಡ್ತಿಗೆ ಅವಕಾಶ ಕೊಡುವುದು. |
| 11 | ಎಲ್ಲಾ ಗ್ರಾ.ಪಂ. ಸಿಬ್ಬಂದಿಗಳಿಗೆ ವೈದ್ಯಕೀಯ ವೆಚ್ಚವನ್ನು 5 ಲಕ್ಷಕ್ಕೆ ಹೆಚ್ಚಳ ಮಾಡುವುದು. |
| 12 | ಕರವಸೂಲಿಗಾರ, ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಿಂದ ಕಾರ್ಯದರ್ಶಿ ಗ್ರೇಡ್-2 ಮತ್ತು ಎಸ್.ಡಿ.ಎ.ಎ. ಹುದ್ದೆಗಳಿಗೆ ಸೇವೆ ಒಳಗಿನ ನೇರ ನೇಮಕಾತಿ ಬದಲಾಗಿ ಮುಂಬಡ್ತಿ ಎಂದು ಬದಲಾವಣಿ ಮಾಡುವುದು. |

ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟದ ಬೇಡಿಕೆಗಳು:

| ಕ್ರ. ಸಂ | ಬೇಡಿಕೆ |
| --- | --- |
| 1 | ಸಂವಿಧಾನದ ಪ್ರಕರಣ 243-ಜಿ ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 58(4)ರ ಅನ್ವಯ ಗ್ರಾಮದಿ ಪಂಚಾಯತಿಗಳು ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸುವಂತಾಗಲು, ಅಧಿನಿಯಮದ ಪ್ರಕರಣ 58, ಹಾಗೂ 1 ನೇ ಅನುಸೂಚಿಯಲ್ಲಿರುವ ಜವಾಬ್ದಾರಿಗಳನ್ನು ನಿರ್ವಹಿಸಲು ಪ್ರಕರಣ 2(28-ಸಿ) ಅನ್ವಯ ಜವಾಬ್ದಾರಿ ನಕ್ಷೆ ರಚಿಸಬೇಕು. ಜವಾಬ್ದಾರಿ ನಕ್ಷೆಯಲ್ಲಿರುವಂತೆ ಆಯಾ ಜವಾಬ್ದಾರಿಗೆ ಸಂಬಂಧಿಸಿದ ಅಧಿಕಾರ, ಹಣಕಾಸು, ಮಾನವ ಸಂಪನ್ಮೂಲ ಹಾಗೂ ಜವಾಬ್ದಾರಿ ನಿರ್ವಹಿಸುವ ಸ್ವಾತಂತ್ರ್ಯವನ್ನು ಪಂಚಾಯತಿಗಳಿಗೆ ವರ್ಗಾಯಿಸಬೇಕು ಹಾಗೂ ನೇಮಕವಾಗಿರುವ/ ವರ್ಗಾವಣೆಯಾಗಿ ಬಂದಿರುವ ಅಧಿಕಾರಿಗಳು ಪಂಚಾಯತಿಗಳಿಗೆ ಉತ್ತರದಾಯಿತ್ವ ಹೊಂದಿರುವ ಹಾಗೆ ಕ್ರಮ ಕೈಗೊಳ್ಳಬೇಕು ಎಂದು ಒಕ್ಕೂಟದ ಪದಾಧಿಕಾರಿಗಳು ಕೋರಿದರು. |
| 2 | ಗ್ರಾಮ ಪಂಚಾಯತಿಗಳು ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸುವಂತಾಗಲು, ಗ್ರಾಮ ಪಂಚಾಯತಿ ಅಧ್ಯಕ್ಷರು ಕಾರ್ಯನಿರ್ವಾಹಕ ಮುಖ್ಯಸ್ಥನಾಗಿ ಕಾರ್ಯನಿರ್ವಹಿಸುವಂತಾಗಲು ಹಾಗೂ ಪಿಡಿಒ ಮುಖ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುವಂತಾಗಲು ಗ್ರಾಮ ಪಂಚಾಯತಿ ಕಛೇರಿ ನಿರ್ವಹಣಾ ಕೈಪಿಡಿಯನ್ನು ರಚಿಸಬೇಕು ಎಂದು ಕೋರಿದರು |
| 3 | ಗ್ರಾಮ ಪಂಚಾಯತಿಯ ಸ್ಥಾಯಿ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುಂತಾಗಲು ನಿಯಮಗಳನ್ನು ರೂಪಿಸಬೇಕು ಎಂದು ಕೋರಿದರು. |
| 4 | ಗ್ರಾಮ ಪಂಚಾಯತಿ ಹಂತದ ಕೆಡಿಪಿ ಸಭೆಗಳು ಯಶಸ್ವಿಯಾಗಿ ನಡೆಯುವಂತಾಗಲು, ಎಲ್ಲಾ ಇಲಾಖೆಗಳ ಗ್ರಾಮ ಪಂಚಾಯತಿ ಹಂತದ ಅಧಿಕಾರಿಗಳು ಭಾಗವಹಿಸುವುದನ್ನು ಖಾತ್ರಿಗೊಳಿಸಲು ಕೆಡಿಪಿ ಸಭೆಗಳನ್ನು ಶಾಸನಬದ್ಧಗೊಳಿಸಬೇಕು ಎಂದು ಕೋರಿದರು. |
| 5 | ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ರಾಜ್ಯ ಶಿಷ್ಟಾಚಾರದ ವ್ಯಾಪ್ತಿಗೆ ತರಬೇಕು. ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ನಡೆಯುವ ಸರ್ಕಾರದ ಕಾರ್ಯಕ್ರಮಗಳಿಗೆ ಆಹ್ವಾನಿಸಬೇಕು ಹಾಗೂ ಆಹ್ವಾನ ಪತ್ರಿಕೆ ಮತ್ತು ಶಿಲಾಫಲಕಗಳಲ್ಲಿ ಅವರ ಹೆಸರುಗಳನ್ನು ಮುದ್ರಿಸಬೇಕು. ವಿಧಾನಸೌಧ ಹಾಗೂ ಇತರೆ ಸರ್ಕಾರಿ ಕಛೇರಿಗಳಲ್ಲಿ, ಟೋಲ್‌ಗಳಲ್ಲಿ ಮುಕ್ತ ಪ್ರವೇಶಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಕೋರಿದರು |
| 6 | ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಸಿಕ ಗೌರವಧನವನ್ನು ಕೇರಳ ರಾಜ್ಯದಲ್ಲಿರುವಂತೆ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ 15,000 ರೂಗಳು, ಉಪಾಧ್ಯಕ್ಷರಿಗೆ 12,000 ರೂಗಳು ಹಾಗೂ ಸದಸ್ಯರಿಗೆ 10,000 ರೂಗಳಿಗೆ ಹೆಚ್ಚಿಸಬೇಕು ಎಂದು ಕೋರಿದರು. ಜೊತೆಗೆ ಪಿಂಚಣಿ ನೀಡುವ ವ್ಯವಸ್ಥೆ ಜಾರಿಗೊಳಿಸಬೇಕು, ಉಪವೇಶನ ಶುಲ್ಕವನ್ನು 500 ರೂಗಳಿಗೆ ಹೆಚ್ಚಿಸಬೇಕು, ಗ್ರಾಮ ಪಂಚಾಯತಿ ಸದಸ್ಯರಿಗೆ ಜನರ ಕೆಲಸಗಳಿಗಾಗಿ ಓಡಾಡಲು ಉಚಿತ ಬಸ್ ಪಾಸ್ ವ್ಯವಸ್ಥೆ ನೀಡಬೇಕು ಮತ್ತು ಆರೋಗ್ಯ ವಿಮೆ ವ್ಯವಸ್ಥೆ ಮಾಡಬೇಕು ಎಂದು ಒಕ್ಕೂಟದ ಪದಾಧಿಕಾರಿಗಳು ಆಗ್ರಹಿಸಿದರು. |
| 7 | ಮೇಲಿನ ಹಂತದ ಅಧಿಕಾರಿಗಳು ಗ್ರಾಮ ಪಂಚಾಯತಿಗಳನ್ನು ತಮ್ಮ ಕೆಳಗಿನ ಶಾಖಾ ಕಚೇರಿಗಳಂತೆ ನಡೆಸಿಕೊಳ್ಳುವುದನ್ನು ನಿಲ್ಲಿಸಬೇಕು. |
| 8 | ಗ್ರಾಮ ಪಂಚಾಯತಿಗಳು ನಿರ್ವಹಣೆಮಾಡುವ ಬೀದಿ ದೀಪಗಳು ಹಾಗೂ ಕುಡಿಯುವ ನೀರು ಸರಬರಾಜು ಘಟಕಗಳಿಗೆ ವಿದ್ಯುತ್ ಸರಬರಾಜು ಕಂಪನಿಗಳು ಮೀಟರ್ ಅಳವಡಿಸದೆ ಮತ್ತು ಎನರ್ಜಿ ಆಡಿಟಿಂಗ್ ಮಾಡದೆ ಸರಾಸರಿ ಆಧಾರದ ಮೇಲೆ ವಿದ್ಯುತ್ ಬಿಲ್ ನೀಡುತ್ತಿದ್ದು, ಸರಿಯಾದ ಲೆಕ್ಕವಿಲ್ಲದೆ ವಿದ್ಯುತ್ ಬಿಲ್ ಕಟ್ಟಲಾಗುತ್ತಿದೆ. ಅಲ್ಲದೆ ದಿನಾಂಕ 31-3-2015ರ ವರೆಗೆ ರಾಜ್ಯ ಸರ್ಕಾರ ಗ್ರಾಮ ಪಂಚಾಯತಿಗಳ ವಿದ್ಯುತ್ ಬಿಲ್ ಬಾಕಿಯನ್ನು ಪಂಚಾಯತಿಗಳ ಪರವಾಗಿ ಕಟ್ಟಿರುವುದಾಗಿ ತಿಳಿಸಿದ್ದರು, ವಿದ್ಯುತ್ ಕಂಪನಿಗಳು ಹಳೆಯ ಬಾಕಿಯನ್ನು ಬಿಲ್ ಗಳಲ್ಲಿ ತೋರಿಸುತ್ತಲೇ ಬರುತ್ತಿವೆ. ಕೂಡಲೆ ಸರ್ಕಾರ ಮಧ್ಯ ಪ್ರವೇಶಿಸಿ ಸಮಸ್ಯೆಯನ್ನು ಬಗೆಹರಿಸಬೇಕು. ವಿತರಣೆಯಲ್ಲಾಗುತ್ತಿರುವ ವಿದ್ಯುತ್ ಸೋರಿಕೆಯಿಂದ ಉಂಟಾಗುತ್ತಿರುವ ಆದಾಯದ ಕೊರತೆಯನ್ನು ಗ್ರಾಮ ಪಂಚಾಯತಿಗಳ ಬಳಕೆಯ ಮೇಲೆ ಹಾಕುತ್ತಿದ್ದು, ಇದು ನಿಲ್ಲಬೇಕು. ಕೃಷಿ ಉಪಯೋಗಕ್ಕಾಗಿ ಉಚಿತ ವಿದ್ಯುತ್ ನೀಡಿ, ಗೃಹಬಳಕೆಗೆ ರಿಯಾಯತಿ ನೀಡಿರುವ ಸರ್ಕಾರ/ ವಿದ್ಯುತ್ ಕಂಪನಿಗಳು, ಗ್ರಾಮೀಣ ಕುಡಿಯುವ ನೀರಿನ ಯೋಜನೆಗೆ ವಾಣಿಜ್ಯ ದರ ವಿಧಿಸುತ್ತಿರುವುದು ಪಂಚಾಯತಿಗಳನ್ನು ಆರ್ಥಿಕ ಸಂಕಷ್ಟಕ್ಕೆ ದೂಡಿದೆ. ಆದ್ದರಿಂದ ಗ್ರಾಮೀಣ ಕುಡಿಯುವ ನೀರು ಯೋಜನೆಗೂ ರಿಯಾಯತಿ ದರದಲ್ಲಿ ವಿದ್ಯುತ್ ನೀಡಬೇಕು ಎಂದು ಕೋರಿದರು. |
| 9 | ಪಂಚಾಯತ್ ರಾಜ್ ಸಂಸ್ಥೆಗಳು ರಾಜ್ಯ ಸರ್ಕಾರದ ಲಾಂಛನವನ್ನು ಬಳಸುವಂತಿಲ್ಲವಾದ್ದರಿಂದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅರ್ಥಪೂರ್ಣವಾದಂತಹ ಪ್ರತ್ಯೇಕ ಲಾಂಛನವನ್ನು ಸೃಜಿಸಿ ನೀಡಲು ಕೋರಿದರು. |
| 10 | ಪಂಚಾಯತ್ ಆಡಳಿತ ಸೇವೆ ಜಾರಿಗೊಳಿಸಬೇಕು. |

ಅನುಬಂಧ-2

**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಬೇಡಿಕೆಗಳು** :-

| ಕ್ರ ಸಂ | **ಬೇಡಿಕೆ** | **ಕೈಗೊಂಡ ಕ್ರಮ** |
|---|---|---|
| 1 | ಏಳು ವರ್ಷ ಪೂರೈಸಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಬೇರೆ ತಾಲೂಕಿಗೆ ವರ್ಗಾವಣೆ ಮಾಡುವ ನಿಯಮವನ್ನು ಕೈಬಿಡುವುದು ಹಾಗೂ ಜಿಲ್ಲೆಯಿಂದ ಬೇರೆ ಜಿಲ್ಲೆಗೆ ಇಚ್ಛೆ ಇಲ್ಲದ್ದಿದರೂ ಸಾರ್ವಜನಿಕ ಹಿತಾಸಕ್ತಿ ಎಂದು ತೋರಿಸಿ ವರ್ಗಾವಣೆ ಮಾಡಬಾರದು ಮತ್ತು ವರ್ಗಾವಣೆ ನಿಯಮಗಳಲ್ಲಿ ಯಾವುದೇ ಬದಲಾವಣೆಗೆ ಮುನ್ನ ಸಂಘದ ಸಲಹೆಯನ್ನು ಪಡೆಯುವುದು. | ಕೌನ್ಸಿಲಿಂಗ್ ಮಾಡುವ ಬಗ್ಗೆ ಈಗಾಗಲೇ ವರ್ಗಾವಣೆ ನಿಯಮಗಳನ್ನು ಪ್ರಕಟಿಸಲಾಗಿರುತ್ತದೆ.<br>ಒಂದೇ ತಾಲ್ಲೂಕಿನಲ್ಲಿ 07 ವರ್ಷ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಕೌನ್ಸಿಲಿಂಗ್ ನಿಯಮವು ಈ ಕೆಳಗಿನ ವಿಶೇಷ ವರ್ಗದವರಿಗೆ ವಿನಾಯಿತಿ ನೀಡಲಾಗಿರುತ್ತದೆ.<br>1. ಪತಿ-ಪತ್ನಿ ಪ್ರಕರಣಗಳು.<br>2. 12 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿರುವ ಒಂಟಿ ಮಹಿಳೆ ಅಥವಾ ಒಂಟಿ ಪೋಷಕರ ಪ್ರಕರಣಗಳು ಅಥವಾ ದೈಹಿಕವಾಗಿ ಅವಲಂಬಿತ ಪತಿ/ಪತ್ನಿಯನ್ನು / ಅಂಗವಿಕಲತೆಯ ಮಾನದಂಡದ ಮಟ್ಟವುಳ್ಳ / ಗಂಭೀರ ಕಾಯಿಲೆಯಿರುವ ಮಕ್ಕಳನ್ನು ಹೊಂದಿರುವ ನೌಕರರು.<br>3. ಗಂಭೀರ ಅನಾರೋಗ್ಯದ ಪ್ರಕರಣಗಳು.<br>4. ಅಂಗವಿಕಲತೆಯ ಮಾನದಂಡದ ಮಟ್ಟವುಳ್ಳ ನೌಕರರ ಪ್ರಕರಣಗಳು. |
| | ಕಡ್ಡಾಯ ನಿರೀಕ್ಷಣೆಯಲ್ಲಿರುವ ಪಂ.ಅ.ಅ/ಕಾರ್ಯದರ್ಶಿಗಳಿಗೆ ಕೆಲವು ಜಿಲ್ಲೆಗಳಲ್ಲಿ ವೇತನ ಪಾವತಿಸಿರುವುದಿಲ್ಲ. | ಸ್ಥಳ ನಿರೀಕ್ಷಣೆಯಲ್ಲಿರುವ ಪಂ.ಅ.ಅ/ ಕಾರ್ಯದರ್ಶಿಗಳಿಗೆ ಸ್ಥಳ ನಿಯುಕ್ತಿಗೊಳಿಸಿದ ನಂತರ ನಿಗಧಿತ ಸಮಯದೊಳಗಾಗಿ ವೇತನ ಪಾವತಿಸುವ ಕುರಿತು ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಅದರಂತೆ ಜಿಲ್ಲಾ ಪಂಚಾಯತಿ ಹಂತದಲ್ಲಿ ವೇತನ ಪಾವತಿಗೆ ಕ್ರಮವಹಿಸಲಾಗಿರುತ್ತದೆ. ಕಳೆದ ಸಾಲಿನ ವೇತನ ಪಾವತಿ ಬಾಕಿ ಇದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಲು ಮು.ಕಾ.ನಿ.ಅ ಜಿಲ್ಲಾ ಪಂಚಾಯತಿ ರವರುಗಳಿಗೆ ನಿರ್ದೇಶನ ನೀಡಲಾಗಿದೆ. |
| 2 | ರಾಜ್ಯದ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಯನ್ನು **ಗೆಜೆಟೆಡ್ ಗ್ರೂಪ್ "ಬಿ"** ದರ್ಜೆಗೆ ಉನ್ನತೀಕರಿಸುವುದು. ಇದ್ದಕ್ಕಾಗಿ ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಾಗುವುದಿಲ್ಲ. | ಆರ್ಥಿಕ ಇಲಾಖೆಯು 5950 ಹುದ್ದೆಗಳ ಪೈಕಿ ವೇತನ ಶ್ರೇಣಿ ರೂ.40,900-78,200 ರಲ್ಲಿ 1500 ಹುದ್ದೆಗಳನ್ನು ಉನ್ನತೀಕರಿಸಲು ಸಹಮತಿ ನೀಡಿದ್ದು, ಅದರಂತೆ, **ದಿನಾಂಕ: 29.03.2023** ರಲ್ಲಿ ಆದೇಶ ಹೊರಡಿಸಲಾಗಿದೆ. ಸದರಿ 1500 ಹುದ್ದೆಗಳನ್ನು ಉನ್ನತೀಕರಿಸಲು ಪಂ.ಅ.ಅ ಗಳ ಅಂತಿಮ ಜೇಷ್ಠತಾ ಪಟ್ಟಿಯು ಪ್ರಕಟಗೊಂಡ . ಕೂಡಲೇ ಕ್ರಮವಹಿಸಲಾಗುವುದು<br>ಮುಂದುವರೆದು, 6 ನೇ ವೇತನ ಆಯೋಗದ ಶಿಫಾರಸ್ಸಿನಂತೆ, 2127 ಗ್ರೇಡ್-1 ಗ್ರಾಮ ಪಂಚಾಯತಿಗಳ ಪೈಕಿ ಈಗಾಗಲೇ ಉನ್ನತೀಕರಿಸಿರುವ 1500 ಹುದ್ದೆಗಳ ಜೊತೆಗೆ ಉಳಿದ 627 ಹುದ್ದೆಗಳನ್ನು ಹಿರಿಯ ಪಂ.ಅ.ಅ. ವೃಂದಕ್ಕೆ (ರೂ.40,900-78,200- ಗ್ರೂಪ್ ಬಿ ಕಿರಿಯ ವೃಂದ) ಉನ್ನತೀಕರಿಸಲು ಕ್ರಮವಹಿಸಲಾಗಿರುತ್ತದೆ.<br>ಪಂ.ಅ.ಅ ಗಳ ಜೇಷ್ಠತಾ ಪಟ್ಟಿಯ ಕುರಿತು ಘನ ನ್ಯಾಯಾಲಯದಲ್ಲಿ ಪ್ರಕರಣ ಇರುವುದರಿಂದ 1500 ಹುದ್ದೆಗಳನ್ನು ಇದುವರಿಗೂ ಬಿ-ದರ್ಜೆಗೆ ಉನ್ನತೀಕರಿಸಲು ಆಗಿರುವುದಿಲ್ಲವೆಂದು ತಿಳಿಸುತ್ತಾ, ಎಲ್ಲಾ ಹುದ್ದೆಗಳನ್ನು "ಬಿ-ದರ್ಜೆ" ಗೆ |

| | | |
|---|---|---|
| | | ಉನ್ನತೀಕರಿಸುವ ಬಗ್ಗೆ ಅದರ ಸಾಧಕ ಬಾಧಕಗಳ ಬಗ್ಗೆ ಅಧ್ಯಯನ ಮಾಡಲು ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಅಧ್ಯಕ್ಷತೆಯಲ್ಲಿ, ಪಂ.ಅ.ಅ ವೃಂದದಿಂದ ಒಬ್ಬ ಪ್ರತಿನಿಧಿ ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸಲಾಗಿದ್ದು, 03 ತಿಂಗಳ ಒಳಗಾಗಿ ಪರಿಶೀಲಿಸಿ ವರದಿ ನೀಡಲು ತಿಳಿಸಲಾಗಿರುತ್ತದೆ. |
| 3 | ಗ್ರಾಮ ಪಂಚಾಯತಿಗೆ ಅಗತ್ಯವಿರುವ ಕಾರ್ಯದರ್ಶಿಗಳು, ಲೆಕ್ಕ ಸಹಾಯಕರು ಹಾಗೂ ಅಗತ್ಯವಿದ್ದಷ್ಟು ಗ್ರಾಮ ಪಂಚಾಯತ್ ಸಿಬ್ಬಂದಿಗಳನ್ನು ನೇಮಕ ಮಾಡುವುದು. | ಗ್ರಾಮ ಪಂಚಾಯತಿಗೆ ಅಗತ್ಯವಿರುವ ಸಿಬ್ಬಂದಿಗಳ ನೇಮಕಾತಿ ಮಾಡಲು ಈಗಾಗಲೇ ಅಗತ್ಯ ಕ್ರಮವಹಿಸಲಾಗಿರುತ್ತದೆ.<br><br>ಒಟ್ಟು 247 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೆ.ಪಿ.ಎಸ್.ಸಿ ಯಿಂದ ದಿನಾಂಕ:17.09.2024 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ ದಿ:16.11.2024 ಮತ್ತು 17.11.2024 ರಂದು ಹೈದರಾಬಾದ್-ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ 97 ಹುದ್ದೆಗಳಿಗೆ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ರಾಜ್ಯದ ಉಳಿದ ಭಾಗದ ಜಿಲ್ಲೆಗಳಲ್ಲಿನ 150 ಹುದ್ದೆಗಳಿಗೆ ದಿ: 07.12.2024 ಮತ್ತು 08.12.2024 ರಂದು ಪರೀಕ್ಷೆ ನಡೆಸಲಾಗುತ್ತಿದೆ.<br><br>ಖಾಲಿ ಇರುವ 212 ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗಳಿಗೆ ದಿನಾಂಕ: 15.03.2024 ರಂದು, 298 ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ಹುದ್ದೆಗಳಿಗೆ ದಿನಾಂಕ:01.03.2024 ರಂದು ಮತ್ತು 89 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ದಿನಾಂಕ:15.03.2024 ರಂದು ನೇಮಕಾತಿಯನ್ನು ಮಾಡಲು ಕೆ.ಪಿ.ಎಸ್.ಸಿ.ಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಕೆ.ಪಿ.ಎಸ್.ಸಿ ಯಿಂದ ಅಧಿಸೂಚನೆ ಹೊರಡಿಸಲು ಬಾಕಿ ಇರುತ್ತದೆ.<br><br>ಗ್ರಾಮ ಪಂಚಾಯತಿಗಳಲ್ಲಿ ದಿನಾಂಕ: 30.10.2017 ರ ಪೂರ್ವದಲ್ಲಿ ನೇಮಕಾತಿ ಹೊಂದಿ ವಿದ್ಯಾರ್ಹತೆ ಸಮಸ್ಯೆಯಿಂದ ಅನುಮೋದನೆಗೆ ಬಾಕಿ ಇರುವ 11170 ಸಿಬ್ಬಂದಿಗಳನ್ನು ಒಂದು ಬಾರಿಗೆ ಅನುಮೋದನೆ ನೀಡಲು ಸರ್ಕಾರದಿಂದ ದಿನಾಂಕ: 18.11.2023 ರಂದು ಆದೇಶ ಹೊರಡಿಸಲಾಗಿದ್ದು, ಜಿಲ್ಲಾ ಪಂಚಾಯತಿಗಳಲ್ಲಿ ಅನುಮೋದನ ಪ್ರಕ್ರಿಯ ಜಾರಿಯಲ್ಲಿರುತ್ತದೆ.<br><br>ಎಲ್ಲಾ ದಾಖಲಾತಿಗಳು ಸರಿ ಇದ್ದು, ಅನುಮೋದನೆಗೆ ಬಾಕಿ ಇರುವ 7515 ಗ್ರಾಮ ಪಂಚಾಯತಿ ಸಿಬ್ಬಂದಿಗಳನ್ನು ಒಂದು ಬಾರಿಗೆ ಅನುಮೋದನೆ ನೀಡಲು ಸರ್ಕಾರದಿಂದ ದಿನಾಂಕ:16.03.2024 ರಂದು ಆದೇಶ ಹೊರಡಿಸಲಾಗಿದ್ದು, ಜಿಲ್ಲಾ ಪಂಚಾಯತಿಗಳಲ್ಲಿ ಅನುಮೋದನ ಪ್ರಕ್ರಿಯ ಜಾರಿಯಲ್ಲಿರುತ್ತದೆ.<br><br>ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಗ್ರಾಮ ಪಂಚಾಯತಿ ಸಿಬ್ಬಂದಿಗಳನ್ನು ಭರ್ತಿ ಮಾಡಲು ದಿನಾಂಕ: 26.06.2024 ರಂದು ಎಲ್ಲಾ ಜಿಲ್ಲೆಗಳ ಮು.ಕಾ.ನಿ.ಅ.ಗಳಿಗೆ ನಿರ್ದೇಶನ ನೀಡಲಾಗಿದ್ದು, ಜಿಲ್ಲಾ ಪಂಚಾಯತಿಗಳಲ್ಲಿ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

| | | |
|---|---|---|
| | | ದಿನಾಂಕ: 31.10.2017 ಕ್ಕಿಂತ ಪೂರ್ವದಲ್ಲಿ ಗ್ರಾಮ ಪಂಚಾಯತಿಗಳಲ್ಲಿ ನೇಮಕಗೊಂಡು ಜಿ.ಪಂ, ಮು.ಕಾ.ನಿ.ಅ. ರವರಿಂದ ನೇಮಕಾತಿಗೆ ಅನುಮೋದನೆ ಪಡೆಯದೆ ಮರಣ ಹೊಂದಿದ ನೌಕರರ ಕುಟುಂಬಕ್ಕೆ ಅನುಕಂಪದ ಆಧಾರದ ಮೇಲೆ ನೌಕರಿಯನ್ನು ನೀಡುವ ಬಗ್ಗೆ ದಿನಾಂಕ: 18.11.2023 ರಲ್ಲಿ ಎಲ್ಲಾ ಜಿ.ಪಂ, ಮು.ಕಾ.ನಿ.ಅ. ಗಳಿಗೆ ನಿರ್ದೇಶನ ನೀಡಲಾಗಿದ್ದು, ಜಿಲ್ಲಾ ಪಂಚಾಯತಿಗಳಲ್ಲಿ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| 4 | ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಬೇಕು. | ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾದ ರಿಟ್ ಅರ್ಜಿ ಸಂ: 4524/2021 ರಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:22.06.2023 ರ ಆದೇಶದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲು ಆಯುಕ್ತರು, ಪಂಚಾಯತ್ ರಾಜ್, ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲು ನಿರ್ದೇಶನ ನೀಡಿರುವ ಮೇರೆಗೆ ಸಮಿತಿಯನ್ನು ರಚಿಸಲಾಯಿತು. ಸದರಿ ಸಮಿತಿಯು ಈ ಹಿಂದೆ ದಿನಾಂಕ:21.02.2014 ರ ಅಧಿಕೃತ ಜ್ಞಾಪನ ಸಂ: ಗ್ರಾಅಪ 374 ಗ್ರಾಪಂಕಾ 2013 ರಲ್ಲಿ ಪ್ರಕಟಗೊಂಡ ಜೇಷ್ಠತಾ ಪಟ್ಟಿಯಲ್ಲಿ ಬಾಧಿತರಾದ ನೌಕರರ ಹೇಳಿಕೆಗಳನ್ನು ಆಲಿಸಿ, ಅವರುಗಳ ಆಕ್ಷೇಪಣೆಗಳನ್ನು ಪರಿಶೀಲಿಸಿ, ದಿನಾಂಕ: 08.06.2024 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆ. ಅದರಂತೆ ಸರ್ಕಾರವೂ ದಿನಾಂಕ:13.06.2024 ರಂದು ಸದರಿ ವೃಂದದ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದೆ. ಸಮಿತಿಯ ವರದಿಯನ್ನು ಪ್ರಶ್ನಿಸಿ ಮಾನ್ಯ ನ್ಯಾಯಾಲಯದಲ್ಲಿ ಮಧ್ಯಂತರ ಅರ್ಜಿಯನ್ನು ಸಲ್ಲಿಸಲಾಗಿದ್ದು, ದಿನಾಂಕ:16.07.2024 ರ ಆದೇಶದಲ್ಲಿ ಮಾನ್ಯ ನ್ಯಾಯಾಲಯವು ಆಕ್ಷೇಪಣೆಗಳನ್ನು ಪರಿಶೀಲಿಸುವಂತೆ ಹಾಗೂ ಮುಂದಿನ ವಿಚಾರಣಾ ದಿನಾಂಕದ ವರೆಗೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬಾರದೆಂದು ನಿರ್ದೇಶನ ನೀಡಿದೆ. ಸ್ವೀಕರಿಸಿದ ಆಕ್ಷೇಪಣೆಗಳು ಪರಿಗಣನೆಯಲ್ಲಿವೆ. ಮಾನ್ಯ ನ್ಯಾಯಾಲಯದ ಮುಂದಿನ ಆದೇಶವನ್ನು ಅನುಸರಿಸಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕ್ರಮ ವಹಿಸಲಾಗುವುದು. |
| 5 | ಕುಂದು ಕೊರತೆ ಪ್ರಾಧಿಕಾರವನ್ನು ಪೊಲೀಸ್ ಇಲಾಖೆ ಮಾದರಿಯಲ್ಲಿ ಸದೃಢಗೊಳಿಸುವುದು ಮತ್ತು ತಜ್ಞರ ಸಮಿತಿ ನೇಮಿಸುವುದು. | ಈಗಾಗಲೇ ವಿಭಾಗ ಮಟ್ಟದಲ್ಲಿ 04 ಪ್ರಾಧಿಕಾರ ರಚನೆ ಮಾಡಲಾಗಿದ್ದು, ಜಿಲ್ಲೆಗೆ ಒಂದರಂತೆ ಪ್ರಾಧಿಕಾರ ರಚನೆ ಕುರಿತು ಕಡತ ಪರಿಶೀಲನೆಯಲ್ಲಿದೆ. ತಜ್ಞರ ಸಮಿತಿಯನ್ನು ನೇಮಿಸುವ ಕುರಿತು ಕ್ರಮ ವಹಿಸಲಾಗುವುದು. |
| | ಕುಂದು ಕೊರತೆಗಳ ಬಗ್ಗೆ ಎರಡು ತಿಂಗಳಿಗೊಮ್ಮೆ ಜಿಲ್ಲಾ ಮಟ್ಟದಲ್ಲಿ ಸಭೆಯನ್ನು ಕರೆಯುವುದು. | ಈಗಾಗಲೇ ಈ ಕುರಿತು ಜಿಲ್ಲಾ ಪಂಚಾಯತಿಗಳಿಗೆ ನಿರ್ದೇಶನವನ್ನು ನೀಡಲಾಗಿರುತ್ತದೆ. ಪ್ರತಿ ಮಾಹೆಯಲ್ಲಿ ಮೂರನೇ ಶನಿವಾರದಂದು ಕುಂದು ಕೊರತೆಗಳ ಬಗ್ಗೆ ಚರ್ಚಿಸುವುದಕ್ಕಾಗಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಿಗಧಿಪಡಿಸಲಾಗಿರುತ್ತದೆ. |
| | ಏಕರೂಪದ ಅಡಿಟ್ ಪದ್ಧತಿ ಜಾರಿಗೊಳಿಸುವುದು. | ಆಡಿಟ್ ಕುರಿತು ಹಲವಾರು ತರಬೇತಿ ಮತ್ತು ಕಾರ್ಯಗಾರಗಳನ್ನು ಈಗಾಗಲೇ ಮಾಡಲಾಗಿರುತ್ತದೆ. ಆದರೂ ಸಹ ಸಾಮರ್ಥ್ಯಭಿವೃದ್ಧಿಗಾಗಿ ಮತ್ತೊಮ್ಮೆ ತರಬೇತಿಯನ್ನು ನೀಡಲು ನಿರ್ದೇಶನ ನೀಡಲಾಗುವುದು. ಮಹಾತ್ಮ ಗಾಂಧಿ ನರೇಗಾ ಯೋಜನೆಯ ಹಾಗೂ 15 ನೇ ಹಣಕಾಸು ಯೋಜನೆಯ ಆಡಿಟ್ ನ್ನು ಏಕ ಕಾಲದಲ್ಲಿ ಮಾಡಲು ನಿರ್ದೇಶನ ನೀಡಲಾಗುವುದು. ಜಮಾಬಂದಿಯನ್ನು ಕೈಬಿಡುವ ಬಗ್ಗೆ ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| | ಸೇವಾ ವಿಷಯಗಳನ್ನು ಸಕಾಲ ವ್ಯಾಪ್ತಿಗೆ ತರುವುದು | ಈ ಬಗ್ಗೆ ಪರಿಶೀಲನೆಯಲ್ಲಿದ್ದು, ಕೂಡಲೇ ಕ್ರಮ ವಹಿಸಲಾಗುವುದು |
| 6 | ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿಯಾಗಿ ಪರಿವರ್ತನೆಗೊಂಡಾಗ, ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ನೌಕರರನ್ನು ಪಟ್ಟಣ ಪಂಚಾಯತಿಯಲ್ಲಿ ವಿಲೀನಗೊಳಿಸುವುದು. | ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ನೌಕರರು ತಮ್ಮ ಹುದ್ದೆಗೆ ಆಯ್ಕೆಯಾದ ವೃಂದ ಮತ್ತು ನೇಮಕಾತಿ ನಿಯಮಗಳಂತೆ, ಪ್ರಥಮ ಆದ್ಯತೆಯಲ್ಲಿ ಮಾತ್ರ ಇಲಾಖೆಯಲ್ಲಿಯೇ ಸ್ಥಳ ನಿಯುಕ್ತಿ ಮಾಡಲಾಗುತ್ತಿದೆ ಹಾಗೂ ಇಲಾಖೆಯಲ್ಲಿಯೇ ಹೆಚ್ಚುವರಿ ಹುದ್ದೆಗಳು ಖಾಲಿ ಇರುವುದರಿಂದ ಬೇರೆ ಇಲಾಖೆಗೆ ವಿಲೀನಗೊಳಿಸುವುದು ಸೂಕ್ತವಲ್ಲ. ಆದಾಗ್ಯೂ ಮುಂದಿನ ದಿನಗಳಲ್ಲಿ ಅವಶ್ಯಕತೆ ಇದ್ದಲ್ಲಿ ನಿರ್ದಿಷ್ಟ ಪ್ರಕರಣಗಳ ಕುರಿತು ನಗರಾಭಿವೃದ್ಧಿ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ವಹಿಸಲಾಗುವುದು |
| 7 | ಸಂಘದ ಸಲಹೆಯ ಮೇರೆಗೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ನೌಕರ ಸ್ನೇಹಿ ತಿದ್ದುಪಡಿಯನ್ನು ತರುವುದು. | ವೃಂದ ಮತ್ತು ನೇಮಕಾತಿಯ ಕರಡು ನಿಯಮಗಳನ್ನು ಪ್ರಕಟಿಸಿದಾಗ, ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿರುತ್ತದೆ. ನೇರ ನೇಮಕಾತಿಯನ್ನು ಕಾಲಮಿತಿಯೊಳಗೆ ನಡೆಸಲು ಕ್ರಮ ವಹಿಸಲಾಗುವುದು. |
| 8 | ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಇತರೆ ಇಲಾಖೆಯಲ್ಲಿರುವ ಸಮಾನಾಂತರ ಹುದ್ದೆಗಳಿಗೆ ನಿಯೋಜನೆ ಮೇಲೆ ಹೋಗಲು ಒಟ್ಟು ಮಂಜೂರಾದ ಹುದ್ದೆಗಳಲ್ಲಿ 10% ಹುದ್ದೆಗಳಿಗೆ ಅನುಮತಿ ನೀಡುವುದು. | ಈಗಾಗಲೇ, ಬಹಳಷ್ಟು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸಮನಾಂತರ ಹುದ್ದೆಗಳಲ್ಲಿ ನಿಯೋಜನೆ ಮೇಲೆ ಹೋಗಿರುತ್ತಾರೆ. ಇಲಾಖೆಯಲ್ಲಿ ಬಹಳಷ್ಟು ಪಿ.ಡಿ.ಒ ಹುದ್ದೆಗಳು ಖಾಲಿ ಇರುವುದರಿಂದ ಇದರ ಬಗ್ಗೆಯು ಸಹ ಗಮನದಲ್ಲಿಟ್ಟುಕೊಳ್ಳಬೇಕಾಗುತ್ತದೆ |
| 9 | ಪಂಚಾಯತಿ ಅಭಿವೃದಿ ಅಧಿಕಾರಿಗಳಿಗೆ ಪ್ರಯಾಣ ಭತ್ಯೆ ಹೆಚ್ಚಳ ಮಾಡುವುದು | ಪರಿಶೀಲನೆಯಲ್ಲಿರುತ್ತದೆ. |

ಗ್ರೇಡ್-1 ಕಾರ್ಯದರ್ಶಿಗಳ ಬೇಡಿಕೆ:

| ಕ್ರ. ಸಂ | ಬೇಡಿಕೆ | ಕೈಗೊಂಡ ಕ್ರಮ |
|---|---|---|
| 1 | ಗ್ರೇಡ್ -1 ಕಾರ್ಯದರ್ಶಿಗಳ ವೃಂದದ ಜೇಷ್ಠತಾ ಪಟ್ಟಿಯನ್ನು ತುರ್ತಾಗಿ ಪ್ರಕಟಣೆ ಮಾಡಿ, ಪಿ.ಡಿ.ಓ ವೃಂದಕ್ಕೆ ಮುಂಬಡ್ತಿ ನೀಡುವ ಬಗ್ಗೆ ಆಯುಕ್ತರಿಗೆ ಸರ್ಕಾರದ ನಿರ್ದೇಶನವಿದ್ದರೂ, ಮುಂಬಡ್ತಿ ನೀಡದೆ ನಿರಾಸಕ್ತಿ ವಹಿಸುತ್ತಿರುವುದು ಸಾವಿರಕ್ಕೂ ಅಧಿಕ ವಿವಿಧ ವೃಂದದ ನೌಕರರು ಮುಂಬಡ್ತಿಯಿಂದ ವಂಚಿತರಾಗಿದ್ದು ಕಾಲಮಿತಿಯೊಳಗೆ ಮುಂಬಡ್ತಿಗೆ ಕ್ರಮವಹಿಸಲು ಕೋರುತ್ತೇವೆ. | ಆಯುಕ್ತರ ಅಧ್ಯಕ್ಷತೆಯ ಸಮಿತಿಯಲ್ಲಿ ಪರಿಶೀಲಿಸಲು ಆದೇಶಿಸಲಾಗಿರುತ್ತದೆ. |
| 2 | ಕಾರ್ಯದರ್ಶಿ ಗ್ರೇಡ್-1 ವೃಂದದಿಂದ ಪಿಡಿಒ ವೃಂದಕ್ಕೆ ಈಗಿರುವ ಮುಂಬಡ್ತಿ ಅನುಪಾತವನ್ನು ಶೇಕಡ 35 ರಿಂದ 60ಕ್ಕೆ ಹೆಚ್ಚಿಸುವ ಬಗ್ಗೆ. | ಆಯುಕ್ತರ ಅಧ್ಯಕ್ಷತೆಯ ಸಮಿತಿಯಲ್ಲಿ ಪರಿಶೀಲಿಸಲು ಆದೇಶಿಸಲಾಗಿರುತ್ತದೆ. |

ಗ್ರೇಡ್-2 ಕಾರ್ಯದರ್ಶಿಗಳ ಬೇಡಿಕೆ

| | | |
|---|---|---|
| 1 | ಗ್ರೇಡ್-2 ಕಾರ್ಯದರ್ಶಿ ಹುದ್ದೆಯಿಂದ ಗ್ರೇಡ್-1 ಕಾರ್ಯದರ್ಶಿ ಹುದ್ದೆಗೆ ಕಳೆದ 12 ರಿಂದ 14 ವರ್ಷಗಳ ಕಾಲ ಬಡ್ತಿ ಇಲ್ಲದೆ ಕಾರ್ಯ ನಿರ್ವಹಿಸುತ್ತಿದ್ದು, ಗ್ರೇಡ್-2 ಕಾರ್ಯದರ್ಶಿಗಳಿಗೆ ನೇರ ನೇಮಕಾತಿ ಕೋಟಾದಡಿ ಒಂದು ಬಾರಿ ಏಕಕಾಲದಲ್ಲಿ ಬಡ್ತಿ ನೀಡುವುದು. | ನಿಯಮಗಳಲ್ಲಿ ಅವಕಾಶವಿರುವುದಿಲ್ಲ |
| 2 | ಕಾರ್ಯದರ್ಶಿ ಗ್ರೇಡ್-1 ಹುದ್ದೆಗೆ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿ ಮಾಡುವ ದಿನಾಂಕ: 15.07.2023 ರ ಆದೇಶವನ್ನು ಕೈಬಿಟ್ಟು ಹಿಂದಿನಂತೆ ಜಿಲ್ಲಾ ಮಟ್ಟದಲ್ಲಿ ಜೇಷ್ಠತ ಪಟ್ಟಿಯನ್ನು ಮಾಡುವುದು. | ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| 3 | ಗ್ರೇಡ್-2 ಕಾರ್ಯದರ್ಶಿ ಹುದ್ದೆಯಿಂದ ಗ್ರೇಡ್-1 ಕಾರ್ಯದರ್ಶಿ ಹುದ್ದೆಗೆ ಬಡ್ತಿ ಶೇ.35 ರಷ್ಟಿದ್ದು ಅದನ್ನು ಶೇ.80 ಕ್ಕೆ ಹೆಚ್ಚಿಸಬೇಕು. | ಆಯುಕ್ತರ ಅಧ್ಯಕ್ಷತೆಯ ಸಮಿತಿಯಲ್ಲಿ ಪರಿಶೀಲಿಸಲು ಆದೇಶಿಸಲಾಗಿರುತ್ತದೆ. |
| 4 | 5000 ಕ್ಕಿಂತ ಹೆಚ್ಚಿಗೆ ಇರುವ ಗ್ರಾಮ ಪಂಚಾಯತಿಗಳನ್ನ ಗ್ರೇಡ್-1 ಪಂಚಾಯತಿ ಅಂತಾ ಮೇಲ್ದರ್ಜೆಗೇರಿಸಬೇಕು. | 6000ಕ್ಕಿಂತ ಹೆಚ್ಚು ಜನಸಂಖ್ಯೆ ಇರುವ ಗ್ರಾಮ ಪಂಚಾಯಿತಿಗಳನ್ನು ಗ್ರೇಡ್ - 1 ಮೇಲ್ದರ್ಜೆಗೇರಿಸಲು ಸರ್ಕಾರದ ಹಂತದಲ್ಲಿ ಪ್ರಸ್ತಾವನೆ ಪರಿಶೀಲಿಸಲಾಗಿದ್ದು, 2021 ರ ಜನಗಣತಿ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು. |
| 5 | ಈ ಹಿಂದೆ ಬಿಲ್ ಕಲೆಕ್ಟರ್ ಹುದ್ದೆಯಿಂದ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ಹೊಂದಿದವರಿಗೆ ಪಿಂಚಣಿ ಯೋಜನೆಗೆ ಒಳಪಡಿಸಬೇಕು. | ಈಗಾಗಲೇ ದಿನಾಂಕ:01.04.2006 ಕ್ಕಿಂತ ಹಿಂದೆ ನೇಮಕಾತಿ ಹೊಂದಿರುವ ನೌಕರರಿಗೆ ಹಳೆಯ ಪಿಂಚಣಿ ಯೋಜನೆ ಅನ್ವಯವಾಗುತ್ತದೆ ಮತ್ತು ದಿನಾಂಕ:01.04.2006 ರ ನಂತರ ನೇಮಕಾತಿ ಹೊಂದಿದ್ದಲ್ಲಿ ಹೊಸ ಪಿಂಚಣಿ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿರುತ್ತಾರೆ. ಆದ್ದರಿಂದ ಒಪ್ಪಲು ಆಗುವುದಿಲ್ಲ. |
| 6 | ಗ್ರೇಡ-1 ಕಾರ್ಯದರ್ಶಿ ಹುದ್ದೆಗೆ ಒಂದು ಬಾರಿ ಜಿಲ್ಲಾ ಮಟ್ಟದಲ್ಲಿ ಪದೋನ್ನತಿ ನೀಡಬೇಕು. | ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| 7 | ಗ್ರೇಡ-2 ಕಾರ್ಯದರ್ಶಿಗಳಿಗೆ (ಮೂಲ ಪಂಚಾಯತಿನಲ್ಲಿ ಖಾಲಿ ಇರುವ ಪಂ.ಅ.ಅಗಳ ಪ್ರಭಾರ ಕೊಡಿಸಲು ಆದೇಶ ಮಾಡಿಸಬೇಕು) | ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 68 ರಂತೆ ಪ್ರಭಾರ ವಹಿಸಲು ಅವಕಾಶವಿರುವುದಿಲ್ಲ. ಪಿ.ಡಿ.ಒ ಪ್ರಭಾರ ಕುರಿತು ದಿ:23.11.2018 ರಂದು ಸರ್ಕಾರದಿಂದ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. |
| 8 | ಗ್ರೇಡ-2 ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಜೇಷ್ಠತಾ ಪಟ್ಟಿನ್ನು ಜಿಲ್ಲಾ ಮಟ್ಟದಲ್ಲಿ ಒಂದೇ ಜೇಷ್ಠತಾ ಪಟ್ಟಿಯನ್ನಾಗಿ ಮಾಡುವ ಬಗ್ಗೆ. | ಡಿ.ಪಿ.ಎ.ಆರ್ ಸೇವೆಯಿಂದ ನಿವೃತ್ತರಾಗಿರುವ ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿ ರವರ ಸೇವೆಯನ್ನು ಪಡೆದು ಈ ಬಗ್ಗೆ ಪರಿಶೀಲಿಸಲಾಗುತ್ತಿದೆ. |

ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಬೇಡಿಕೆ:

| ಕ್ರ.ಸಂ | ಬೇಡಿಕೆ | ಕೈಗೊಂಡ ಕ್ರಮ |
|---|---|---|
| 1 | ಹಾಲಿ ಇರುವ ಎಲ್ಲಾ ಗ್ರಾಪಂ ಗಳಿಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆ ಸೃಜನೆ ಮಾಡುವುದು. | ಹಾಲಿ ಇರುವ ಎಲ್ಲಾ ಗ್ರಾಪಂ ಗಳಿಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆ ಸೃಜನೆಯ ಕುರಿತು ಗದಗ ವಿಶ್ವವಿದ್ಯಾಲಯ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರಿಗೆ ಅಧ್ಯೆಯನ ಮಾಡಿ ವರದಿ ಮಾಡಲು ತಿಳಿಸಿದ್ದು, ಈ ಕುರಿತು ಪರಿಶೀಲನೆ ಹಂತದಲ್ಲಿರುತ್ತದೆ. |

| | | |
|---|---|---|
| | ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಪ್ರಥಮ ದರ್ಜೆ ಲೆಕ್ಕ ಸಹಾಯಕರಾಗಿ ಗ್ರೇಡ್ 1 ಗ್ರಾಪಂ ಗಳಲ್ಲಿಯೇ ಮುಂಬಡ್ತಿ ನೀಡುವುದು | ಆಯುಕ್ತರ ಅಧ್ಯಕ್ಷತೆಯ ಸಮಿತಿಯಲ್ಲಿ ಪರಿಶೀಲಿಸಲು ಆದೇಶಿಸಲಾಗಿರುತ್ತದೆ. |
| 2 | ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳಲ್ಲಿ ಖಾಲಿ ಇರುವ ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ಗ್ರಾಮ ಪಂಚಾಯತಿಗಳಲ್ಲಿ ಸುಮಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಬಡ್ತಿಗೆ ಪರಿಗಣಿಸುವುದು. | ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳಲ್ಲಿರುವ ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳು ರಾಜ್ಯ ಲೆಕ್ಕಪತ್ರ ಇಲಾಖೆಯ ಹುದ್ದೆಗಳಾಗಿದ್ದು, ಸದರಿ ಹುದ್ದೆಗಳಲ್ಲಿ ಅವಕಾಶ ಕಲ್ಪಿಸುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| 3 | ಮುಂಬಡ್ತಿ ಹಾಗೂ ನೇರ ನೇಮಕಾತಿ ಮೂಲಕ ಆಯ್ಕೆಯಾಗಿ ಸುಮಾರು 10 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ಒಂದೇ ಬಾರಿಗೆ ಶೇಕಡ 100% ರಷ್ಟು ಬಡ್ತಿ ನೀಡಿ ಗ್ರೇಡ್-1 ಕಾರ್ಯದರ್ಶಿ ಹುದ್ದೆಗೆ ಪರಿಗಣಿಸುವುದು. | ಒಂದೇ ಬಾರಿಗೆ ಶೇ. 100 ರಷ್ಟು ಬಡ್ತಿಯನ್ನು ನೀಡಲು ಅವಕಾಶವಿರುವುದಿಲ್ಲ.<br><br>ನಿಯಮಾವಳಿ ಅನುಸಾರ ಖಾಲಿ ಹುದ್ದೆಗಳಿಗೆ ಎದುರಾಗಿ ಬಡ್ತಿ ನೀಡಲಾಗುತ್ತದೆ. |

ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, ಕರವಸೂಲಿಗಾರ, ನೀರುಗಂಟಿ, ಜವಾನರು, ಸ್ವಚ್ಛತಾಗಾರರ ಬೇಡಿಕೆಗಳು:

| ಕ್ರ. ಸಂ | ಬೇಡಿಕೆ | ಕೈಗೊಂಡ ಕ್ರಮ |
|---|---|---|
| 1 | ಗ್ರಾಮ ಪಂಚಾಯಿತಿಯ ಪಂಚ ನೌಕರರುಗಳಿಗೆ ವೇತನ ಶ್ರೇಣಿ ಮತ್ತು ಸೇವಾ ಹಿರಿತನದ ವೇತನವನ್ನು ಜಾರಿ ಮಾಡಿ ಕಾರ್ಮಿಕ ಇಲಾಖೆಯ ವೇತನವನ್ನು ಹೊರತುಪಡಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದಾನ ವೇತನ ನಿಗದಿಪಡಿಸಿ ನೌಕರರ ಖಾತೆಗಳಿಗೆ ಸಂಬಳವನ್ನು ಪಾವತಿ ಮಾಡುವುದು. | ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| 2 | ಇ.ಎಸ್.ಐ. ಮತ್ತು ಪಿ.ಎಫ್ ಜಾರಿ ಮಾಡುವುದು | ಪರಿಶೀಲನೆಯಲ್ಲಿರುತ್ತದೆ. |
| 3 | ಗ್ರಾಪಂ ಸಿಬ್ಬಂದಿಗಳಿಗೆ ಆರೋಗ್ಯ ವಿಮೆಯನ್ನು ಈಗಾಗಲೇ ರೂ. 50,000 ಗಳು ನೀಡುವಂತೆ ಆದೇಶ ಮಾಡಿದ್ದು, ಇದರಿಂದ ಯಾವ ನೌಕರರಿಗೂ ಪ್ರಯೋಜನ ಆಗುವುದಿಲ್ಲ, ಆದ್ದರಿಂದ ಗ್ರಾಮ ಪಂಚಾಯಿತಿಯ ಕುಟುಂಬದವರಿಗೆ 5 ಲಕ್ಷ ಆರೋಗ್ಯ ವಿಮೆಯನ್ನು ಜಾರಿ ಮಾಡುವುದು. | ದಿನಾಂಕ: 19.02.2024 ರಂದು ನಡೆದ ಸಭೆಯಲ್ಲಿ ಚರ್ಚಿಸಿದಂತೆ ಸರ್ಕಾರದ ಆದೇಶ ದಿನಾಂಕ: 10.08.2024 ರಲ್ಲಿ ಗ್ರಾ.ಪಂ ಸಿಬ್ಬಂದಿಗಳಿಗೆ ಗರಿಷ್ಠ ರೂ.50,000/- ಗಳವರೆಗಿನ ವೈದ್ಯಕೀಯ ವೆಚ್ಚವನ್ನು ಜಿಲ್ಲಾ ಪಂಚಾಯತಿಯ ಆಶ್ವಾಸನನಿಧಿಯಿಂದ ಭರಿಸಲು ಅವಕಾಶ ನೀಡಿ ಆದೇಶಿಸಲಾಗಿರುತ್ತದೆ. ಈಗಾಗಲೇ ಹೊರಡಿಸಿರುವ ಆದೇಶದ ಉಪಯೋಗ ಮತ್ತು ದುರುಪಯೋಗದ ಬಗ್ಗೆ ಪರಿಶೀಲನೆ ಮಾಡಲಾಗುವುದು. ಕೇವಲ ಎರಡು ತಿಂಗಳಲ್ಲಿ ಮತ್ತೆ ರೂ.5.00 ಲಕ್ಷಕ್ಕೆ ಏರಿಸಲು ಬೇಡಿಕೆ ಇಟ್ಟಿದ್ದು, ಸೂಕ್ತವಾಗಿಲ್ಲದ ಕಾರಣ ಈ ಬಗ್ಗೆ ಒಂದು ವರ್ಷದ ನಂತರ ಪರಿಶೀಲಿಸಲಾಗುವುದು. |

| | | |
|---|---|---|
| 4 | ಕರವಸೂಲಿಗಾರ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಿಂದ ಕಾರ್ಯದರ್ಶಿ ಗ್ರೇಡ್ -2 ಮತ್ತು ಎಸ್.ಡಿ.ಎ.ಎ. ಹುದ್ದೆಗಳಿಗೆ ಸರ್ಕಾರದಿಂದ ಸೇವೆ ಒಳಗಿನ ನೇರ ನೇಮಕಾತಿ ಎಂದು ಮಾಡುತ್ತಿದ್ದು ನೇರ ನೇಮಕಾತಿ ಎಂಬ ಪದವನ್ನು ಕೈ ಬಿಟ್ಟು ಮುಂಬಡ್ತಿ ಎಂಬ ಪದವನ್ನು ಸೇರಿಸಿ ಸರ್ಕಾರದ ಆದೇಶ ಮಾಡುವುದು. | ನಿವೃತ್ತ ಡಿ.ಪಿ.ಎ.ಆರ್ ಅಧಿಕಾರಿರವರ ಸೇವೆಯನ್ನು ಪಡೆಯಲಾಗಿದ್ದು, ಈ ಬಗ್ಗೆ ಪರಿಶೀಲನೆಯಲ್ಲಿದೆ. |
| 5 | ಗ್ರಾಮ ಪಂಚಾಯಿತಿಯ ಪಂಚ ನೌಕರರುಗಳಿಗೆ ನಿವೃತ್ತಿ ಉಪಧನವನ್ನು 60 ತಿಂಗಳ ವೇತನದ ಮೊತ್ತವಾಗಿ ಉಪಧನವನ್ನು ನೀಡುವುದು. | ಸರ್ಕಾರದ ಅಧಿಸೂಚನೆ ದಿನಾಂಕ: 29.09.2020 ರಂತೆ ಈಗಾಗಲೇ ಪ್ರತಿ ವರ್ಷಕ್ಕೆ 15 ದಿನಗಳ ವೇತನದಂತೆ ಒಟ್ಟು 20 ತಿಂಗಳ ವೇತನ ಮೀರದಂತೆ ನಿವೃತ್ತಿ ಉಪದನ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಳಕ್ಕೆ ಪರಿಶೀಲಿಸಲಾಗುವುದು. |
| 6 | ಗ್ರಾಮ ಪಂಚಾಯಿತಿಯಲ್ಲಿ ಕ್ಲರ್ಕ್ ಕಂ ಡಿಇಓ, ಬಿಲ್ ಕಲೆಕ್ಟರ್ ಕನಿಷ್ಟ ವಿದ್ಯಾರ್ಹತೆ ಇಲ್ಲದೇ ಕಾರ್ಯನಿರ್ವಹಿಸುತ್ತಿದ್ದು ಇವರಿಗೆ ಒಂದು ಬಾರಿ ಅನುಮೋದನೆ ನೀಡುವುದು. | ಗ್ರಾಮ ಪಂಚಾಯಿತಿಯಲ್ಲಿ ಕ್ಲರ್ಕ್ ಕಂ ಡಿಇಓ, ಬಿಲ್ ಕಲೆಕ್ಟರ್ ಗಳು ಕನಿಷ್ಟ ವಿದ್ಯಾರ್ಹತೆ ಇಲ್ಲದ ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದು, ತಮ್ಮ ಸೇವಾ ಅವಧಿಯಲ್ಲಿ ಕನಿಷ್ಟ ವಿದ್ಯಾರ್ಹತೆಯನ್ನು ಪೂರೈಸಿದ್ದರೇ, ಅಂತಹ ಪ್ರಕರಣಗಳ ಕುರಿತು ಪರಿಶೀಲಿಸಲಾಗುವುದು. |
| 7 | ಕಾರ್ಯದರ್ಶಿ ಗ್ರೇಡ್ -2 ಪದೋನ್ನತಿಯನ್ನು ಶೇಕಡ 100% ಹೆಚ್ಚಿಸುವುದು<br><br>ಕಾರ್ಯದರ್ಶಿ ಗ್ರೇಡ್ -1 ಪದೋನ್ನತಿ ಕೋಟವನ್ನು ಶೇಕಡ 70ಕ್ಕೆ ಹೆಚ್ಚಿಸುವುದು. | ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br><br>ಆಯುಕ್ತರ ಅಧ್ಯಕ್ಷತೆಯ ಸಮಿತಿಯಲ್ಲಿ ಪರಿಶೀಲಿಸಲು ಆದೇಶಿಸಲಾಗಿರುತ್ತದೆ. |
| 8 | ಕಾರ್ಯದರ್ಶಿ ಗ್ರೇಡ್ -2 ಹಾಗೂ ಎಸ್ ಡಿ ಎ ಎ ನೇರ ನೇಮಕಾತಿ ಹುದ್ದೆಗಳನ್ನು ಗ್ರಾಮ ಪಂಚಾಯಿತಿಯ ಕರವಸೂಲಿಗಾರರಿಗೆ ಹಾಗೂ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ರವರಿಗೆ ಒಂದು ಬಾರಿ ಮುಂಬಡ್ತಿಗೆ ಅವಕಾಶ ಕೊಡುವುದು. | ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| 9 | ವಾಟರ್ ಮ್ಯಾನ್ / ನೀರುಘಂಟಿಗಳಿಗೆ ವಾರಕ್ಕೆ ಒಂದು ದಿನ ರಜೆಯನ್ನು ನಿಗದಿಪಡಿಸುವುದು. | ಪರಿಶೀಲನೆಯಲ್ಲಿರುತ್ತದೆ. |
| 10 | ಗ್ರಾಮ ಪಂಚಾಯತ ಕರವಸೂಲಿಗಾರರು ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಿಂದ ಸೇವೆ ಒಳಗಿನ ನೇರ ನೇಮಕಾತಿಗೆ ಎಸ್.ಡಿ.ಎ.ಎ ವೃಂದಕ್ಕೆ ಪದೋನ್ನತಿ ಹೊಂದಲು 75% ರಷ್ಟು ಹೆಚ್ಚಳ ಮಾಡುವುದು. | ಆಯುಕ್ತರ ಅಧ್ಯಕ್ಷತೆಯ ಸಮಿತಿಯಲ್ಲಿ ಪರಿಶೀಲಿಸಲು ಆದೇಶಿಸಲಾಗಿರುತ್ತದೆ. |
| 11 | ಗ್ರಾಮ ಪಂಚಾಯತಿಯಲ್ಲಿ ಕ್ಲರ್ಕ್/ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಜೊತೆಯಲ್ಲಿ, ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿರುವ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್ ಗಳಿಗೆ ಒಂದು ಬಾರಿಗೆ ಅನುಮೋದನೆ ನೀಡುವುದು. ಅಲ್ಲಿಯವರೆಗೆ ಹೊಸದಾಗಿ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕಾತಿ ಆದೇಶವನ್ನು ನೀಡದೇ ಇರುವುದು. | ಪರಿಶೀಲಿಸಲಾಗುವುದು. |

| | | |
|---|---|---|
| 12 | ಆರ್ಥಿಕ ಇಲಾಖೆಯಲ್ಲಿ ಬಾಕಿ ಇರುವ ಸೇವಾ ಹಿರಿತನ ವೇತನ ಮತ್ತು ವೇತನ ಹೆಚ್ಚಳದ ಆದೇಶ ಜಾರಿ ಮಾಡುವ ಎರಡು ಕಡತ ಅನುಮೋದನೆ ನೀಡುವುದು. | ಪರಿಶೀಲನೆಯಲ್ಲಿದೆ. |
| 13 | ಕರವಸೂಲಿಗಾರರು ಮತ್ತು ಡಾಟಾ ಎಂಟ್ರಿ ಆಪರೇಟರ್ ರರಿಗೆ ಪ್ರಯಾಣ ಭತ್ಯೆಯನ್ನು ನೀಡುವುದು. | ಪರಿಶೀಲನೆಯಲ್ಲಿದೆ. |
| 14 | ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರ ರೋಸ್ಟರ್ ಸರಿಯಾಗಿ ಪಾಲನೆ ಮಾಡುವುದು | ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ರೋಸ್ಟರ್‌ನ್ನು ನಿಯಮಾನುಸಾರ ಪಾಲಿಸಲು ದಿನಾಂಕ: 30.10.2024 ರಂದು ನಿರ್ದೇಶನ ನೀಡಲಾಗಿರುತ್ತದೆ. |
| 15 | ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡುವುದು | ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಬ್ಯಾಕ್ ಲಾಗ್ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ದಿನಾಂಕ:08.10.2024 ರಂದು ನಿರ್ದೇಶನ ನೀಡಲಾಗಿರುತ್ತದೆ. |
| 16 | ಪದೋನ್ನತಿ ನೀಡುವಾಗ ನೇಮಕವಾದ ವರ್ಗದಲ್ಲಿ ಪರಿಗಣಿಸದೇ ಪ.ಜಾ ಮತ್ತು ಪ.ಪಂಗಳ ಕೋಟಾದಡಿ ಪದೋನ್ನತಿ ನೀಡುವುದು. | ನಿರ್ದೇಶನ ನೀಡಲಾಗಿರುತ್ತದೆ. |
| 17 | ಸರ್ಕಾರದ ಆದೇಶದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಶೇ 24% ರಷ್ಟು ಮೀಸಲಾತಿ ನಿಗದಿಪಡಿಸಲು ಆದೇಶವಿದ್ದರೂ ಪಾಲಿಸದೇ ಇರುವ ಬಗ್ಗೆ ಕ್ರಮಕೈಗೊಳ್ಳುವುದು. | ನಿರ್ದೇಶನ ನೀಡಲಾಗಿರುತ್ತದೆ. |

ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟದ ಬೇಡಿಕೆಗಳು:

| ಕ್ರ. ಸಂ | ಬೇಡಿಕೆ | ಕೈಗೊಂಡ ಕ್ರಮ |
|---|---|---|
| 1 | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಗ್ರಾಮ ಪಂಚಾಯತಿ ಯೋಜನೆಗಳು ಗ್ರಾಮ ಸಭೆಯಲ್ಲಿ ತಯಾರಿಸಬೇಕು. ಆದರೆ ಸರ್ಕಾರ, ಜಿಲ್ಲಾ ಪಂಚಾಯತಿ ಹಂತದಲ್ಲಿಯೇ ಗ್ರಾಮ ಪಂಚಾಯತಿಗಳು ಅನುಷ್ಠಾನಗೊಳಿಸಬೇಕಾದ ಕಾಮಗಾರಿಗಳನ್ನು ನಿರ್ಧರಿಸಲಾಗುತ್ತಿದೆ. ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಮತ್ತು ರಾಜ್ಯ ಮಟ್ಟದಲ್ಲಿ ಯೋಜನಾ ಸಮಿತಿಗಳಿವೆ. ಆಯಾ ಸಮಿತಿಗಳು ತಮ್ಮ ಹಂತದಲ್ಲಿ ಸ್ವತಂತ್ರವಾಗಿ ಯೋಜನೆಗಳನ್ನು ರೂಪಿಸುವ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಡಬೇಕು ಎಂದು ತಿಳಿಸಿದರು | ಪ್ರಸ್ತುತ ಗ್ರಾಮ ಪಂಚಾಯತಿ ಯೋಜನೆಗಳನ್ನು ಗ್ರಾಮ ಸಭೆಗಳಲ್ಲಿಯೇ ರೂಪಿಸಲಾಗುತ್ತಿದೆ. ಸರ್ಕಾರದ ಆದ್ಯತೆಯ ಕಾರ್ಯಕ್ರಮಗಳು ಮತ್ತು ಆಯವ್ಯಯ ಘೋಷಣೆಗಳನ್ನು ಸ್ಥಳೀಯ ಸರ್ಕಾರಗಳು ಅನುಷ್ಠಾನಗೊಳಿಸುವುದು ಅನಿವಾರ್ಯವೆಂದು ತಿಳಿಸಲಾಯಿತು. |
| 2 | ಗ್ರಾಮ ಪಂಚಾಯತಿಗಳು ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸುವಂತಾಗಲು, ಗ್ರಾಮ ಪಂಚಾಯತಿ ಅಧ್ಯಕ್ಷರು ಕಾರ್ಯವಾಹಕ ಮುಖ್ಯಸ್ಥನಾಗಿ ಕಾರ್ಯನಿರ್ವಹಿಸುವಂತಾಗಲು ಹಾಗೂ ಪಿಡಿಓ ಮುಖ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುವಂತಾಗಲು ಗ್ರಾಮ ಪಂಚಾಯತಿ ಕಛೇರಿ ನಿರ್ವಹಣಾ ಕೈಪಿಡಿಯನ್ನು ರಚಿಸಬೇಕು ಎಂದು ಕೋರಿದರು. | ಕಛೇರಿ ಕಾರ್ಯ ನಿರ್ವಹಣಾ ಕೈಪಿಡಿ ಕರಡು ಸಿದ್ಧವಾಗಿದ್ದು, ಪ್ರಕಟಿಸಲು ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದೆ |

| | | |
|---|---|---|
| 3 | ಗ್ರಾಮ ಪಂಚಾಯತಿಯ ಸ್ಥಾಯಿ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುವಂತಾಗಲು ನಿಯಮಗಳನ್ನು ರೂಪಿಸಬೇಕು ಎಂದು ಕೋರಿದರು. | ಕರಡು ನಿಯಮಗಳನ್ನು ಸಂಸದೀಯ ವ್ಯವಹಾರಗಳ ಇಲಾಖೆಯು ಪರಿಷ್ಕರಣೆ ಮಾಡಿ ಸಲ್ಲಿಸುವಂತೆ ದಿನಾಂಕ:18.09.2024 ರಂದು ಕಡತವನ್ನು ಹಿಂದಿರುಗಿಸುತ್ತಾರೆ. ಅದರಂತೆ ಸದರಿ ನಿಯಮಗಳನ್ನು ಪರಿಷ್ಕರಿಸಲಾಗಿದ್ದು, ಅಧಿಸೂಚನೆ ಹೊರಡಿಸಲು ಕ್ರಮವಹಿಸಲಾಗುವುದು. |
| 4 | ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಸಿಕ ಗೌರವಧನವನ್ನು ಕೇರಳ ರಾಜ್ಯದಲ್ಲಿರುವಂತೆ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ 15,000 ರೂಗಳು, ಉಪಾಧ್ಯಕ್ಷರಿಗೆ 12,000 ರೂಗಳು ಹಾಗೂ ಸದಸ್ಯರಿಗೆ 10,000 ರೂಗಳಿಗೆ ಹೆಚ್ಚಿಸಬೇಕು ಎಂದು ಕೋರಿದರು. ಜೊತೆಗೆ ಪಿಂಚಣಿ ನೀಡುವ ವ್ಯವಸ್ಥೆ ಜಾರಿಗೊಳಿಸಬೇಕು, ಉಪವೇಶನ ಶುಲ್ಕವನ್ನು 500 ರೂಗಳಿಗೆ ಹೆಚ್ಚಿಸಬೇಕು, ಎಂದು ಒಕ್ಕೂಟದ ಪದಾಧಿಕಾರಿಗಳು ಕೋರಿದರು. | ಸರ್ಕಾರದ ಆದೇಶ ಸಂ: ಗ್ರಾಅಪಂ 126 ಜಿಪಿಎಸ 2022 ದಿನಾಂಕ:18.12.2022 ರಂತೆ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ಈ ಹಿಂದೆ ಇದ್ದ ರೂ.3000/- ಗಳನ್ನು ರೂ.6000/- ಗಳಂತೆ, ಉಪಾಧ್ಯಕ್ಷರಿಗೆ ರೂ.2000/- ಗಳನ್ನು ರೂ.4000/- ಗಳಂತೆ ಮತ್ತು ಸದಸ್ಯರಿಗೆ ರೂ.1000/- ಗಳನ್ನು ರೂ.2000/-ಗಳಂತೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ. ಪುನಃ ಗೌರವ ಧನ ಹೆಚ್ಚಳ ಮಾಡುವ ಬೇಡಿಕೆಯ ಕುರಿತು ಸರ್ಕಾರದ ಹಂತದಲ್ಲಿ ತೀರ್ಮಾನಿಸಬೇಕಿದ್ದು, ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ತಿಳಿಸಲಾಯಿತು.<br><br>ಪ್ರಸ್ತುತ ನೀಡಲಾಗುತ್ತಿರುವ ಉಪವೇಶನ ಶುಲ್ಕ ₹ 300/- ಗಳಿಂದ ₹ 350/- ಗಳನ್ನು ಹೆಚ್ಚಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ ಎಂದು ಸಭೆಗೆ ತಿಳಿಸಲಾಯಿತು. ಇದಕ್ಕೆ ಒಕ್ಕೂಟದ ಪ್ರತಿನಿಧಿಗಳು ಆಕ್ಷೇಪ ವ್ಯಕ್ತಪಡಿಸಿ ಉಪವೇಶನ ಶುಲ್ಕವನ್ನು 500 ಕ್ಕೆ ಹೆಚ್ಚಿಸಲು ಸದಸ್ಯರು ಕೋರಿದ್ದು ಈ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ತಿಳಿಸಲಾಯಿತು. |
| 5 | ಗ್ರಾಮ ಪಂಚಾಯತಿಗಳು ನಿರ್ವಹಣೆ ಮಾಡುವ ಬೀದಿ ದೀಪಗಳು ಹಾಗೂ ಕುಡಿಯುವ ನೀರು ಸರಬರಾಜು ಘಟಕಗಳಿಗೆ ವಿದ್ಯುತ್ ಸರಬರಾಜು ಕಂಪನಿಗಳು ಮೀಟರ್ ಅಳವಡಿಸದೆ ಮತ್ತು ಎನರ್ಜಿ ಆಡಿಟಿಂಗ್ ಮಾಡದೆ ಸರಾಸರಿ ಆಧಾರದ ಮೇಲೆ ವಿದ್ಯುತ್ ಬಿಲ್ ನೀಡುತ್ತಿದ್ದು, ಸರಿಯಾದ ಲೆಕ್ಕವಿಲ್ಲದೆ ವಿದ್ಯತ್ ಬಿಲ್ ಕಟ್ಟಲಾಗುತ್ತಿದೆ. ಅಲ್ಲದೆ ದಿನಾಂಕ 31-3-2015ರ ವರೆಗೆ ರಾಜ್ಯ ಸರ್ಕಾರ ಗ್ರಾಮ ಪಂಚಾಯತಿಗಳ ವಿದುತ್ ಬಿಲ್ ಬಾಕಿಯನ್ನು ಪಂಚಾಯತಿಗಳ ಪರವಾಗಿ ಕಟ್ಟಿರುವುದಾಗಿ ತಿಳಿಸಿದ್ದರು, ವಿದ್ಯುತ್ ಕಂಪನಿಗಳು ಹಳೆಯ ಬಾಕಿಯನ್ನು ಬಿಲ್ ಗಳಲ್ಲಿ ತೋರಿಸುತ್ತಲೇ ಬರುತ್ತಿವೆ. ಕೂಡಲೆ ಸರ್ಕಾರ ಮಧ್ಯ ಪ್ರವೇಶಿಸಿ ಸಮಸ್ಯೆಯನ್ನು ಬಗೆಹರಿಸಬೇಕು ವಿತರಣೆಯಲ್ಲಾಗುತ್ತಿರುವ ವಿದ್ಯುತ್ ಸೋರಿಕೆಯಿಂದ ಉಂಟಾಗುತ್ತಿರುವ ಆದಾಯದ ಕೊರತೆಯನ್ನು ಗ್ರಾಮ ಪಂಚಾಯತಿಗಳ ಬಳಕೆಯ ಮೇಲೆ ಹಾಕುತ್ತಿದ್ದು. ಇದು ನಿಲ್ಲಬೇಕು ಎಂದು ಕೋರಿದರು. | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೀದಿ ದೀಪಗಳ ಹಾಗೂ ಕುಡಿಯುವ ನೀರಿನ ಸ್ಥಾವರಗಳ ವಿದ್ಯುತ್ ಬಿಲ್‌ನ್ನು ಪಾವತಿಸಲು ಬೆಸ್ಕಾಂ ವಿಭಾಗದಲ್ಲಿ "ಇ-ಬೆಳಕು" ತಂತ್ರಾಂಶವನ್ನು ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ/161/ಇ-ಆಡಳಿತ/2021, ದಿನಾಂಕ:03.06.2022 ರಲ್ಲಿ ಜಾರಿಗೊಳಿಸಿದ್ದು, ಬಿಲ್‌ಗಳ ಸಮನ್ವಯತೆ, ಬಿಲ್‌ಗಳ ಪಾವತಿ, ನಿಷ್ಕ್ರಿಯ ಸ್ಥಾವರಗಳ ಸಂಪರ್ಕ ಕಡಿತ, ಸ್ಥಾವರಗಳ ಮೀಟರ್ ಮಾಪನಗಳಂತಹ ಕಾರ್ಯಗಳನ್ನು ಸದರಿ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ.<br><br>"ಇ-ಬೆಳಕು" ತಂತ್ರಾಂಶವನ್ನು ಇನ್ನುಳಿದ ಮೂರು ವಿಭಾಗಗಳಿಗೆ ವಿಸ್ತರಿಸುವ ಬಗ್ಗೆ ಇಂಧನ ಇಲಾಖೆಯೊಂದಿಗೆ ಸಮಾಲೋಚಿಸಿ ಕ್ರಮವಹಿಸಲಾಗುವುದು. Energy Audit ಕುರಿತು CEGIS ಮೂಲಕ ಅಧ್ಯಯನ ನಡೆಸಲಾಗುತ್ತಿದೆ. |

| | | |
|---|---|---|
| 6 | ಪಂಚಾಯತ್ ರಾಜ್ ಸಂಸ್ಥೆಗಳು ರಾಜ್ಯ ಸರ್ಕಾರದ ಲಾಂಛನವನ್ನು ಬಳಸುವಂತಿಲ್ಲವಾದ್ದರಿಂದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅರ್ಥಪೂರ್ಣವಾದಂತಹ ಪ್ರತ್ಯೇಕ ಲಾಂಛನವನ್ನು ಸೃಜಿಸಿ ನೀಡಲು ಕೋರಿದರು. | ಪ್ರತ್ಯೇಕ ಲಾಂಛನದ ವಿನ್ಯಾಸವನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸಲಾಗಿದೆ. |
| 7 | ಗ್ರಾಮ ಪಂಚಾಯಿತಿಯ ನಿಧಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಕಾಯ್ದಿರಿಸಿದ ಶೇ.25ರ ಅನುದಾನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ನೀಡುವ ಸೌಲಭ್ಯಗಳಲ್ಲಿ ನಿಗದಿಪಡಿಸಿರುವ ಘಟಕ ವೆಚ್ಚ ಹೆಚ್ಚಿಸುವಂತೆ ಕೋರಿದರು. | ಈ ವಿಷಯದ ಕುರಿತು ಪರಿಶೀಲಿಸಿ ಘಟಕ ವೆಚ್ಚ ಹೆಚ್ಚಿಸುವ ಬಗ್ಗೆ ಪರಿಶೀಲಿಸಲು ಒಕ್ಕೂಟದ ಪ್ರತಿನಿಧಿಗಳನ್ನು ಒಳಗೊಂಡ ಸಮಿತಿಯನ್ನು ರಚಿಸಲಾಗುವುದು. |

ನಿರ್ದೇಶಕರು (ಆ-1)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ